# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1936(2212)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

ವಿಷಯ : ಯಾಂತ್ರೀಕೃತ ತೋಟಗಾರಿಕೆಗೆ ಉತ್ತೇಜನ ನೀಡುವ ಕುರಿತು

(ಅ) ಯಾಂತ್ರೀಕೃತ ತೋಟಗಾರಿಕೆಗಾಗಿ ಇಲಾಖೆಯಲ್ಲಿ ಜಾರಿಯಲ್ಲಿರುವ ವಿವಿಧ ಯೋಜನೆ/ಕಾರ್ಯಕ್ರಮಗಳಾವುವು; (ಯೋಜನೆಯ ಮಾರ್ಗಸೂಚಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಯಾಂತ್ರೀಕೃತ ತೋಟಗಾರಿಕೆ ಯೋಜನೆಗಳಲ್ಲಿ ನಿಗದಿಪಡಿಸಿದ ಫಲಾನುಭವಿಗಳ ಗುರಿ. ಆರ್ಥಿಕ ಭೌತಿಕ ಸಾಧನೆ, ಗುರಿ ಸಾಧಿಸಲು ಬಾಕಿ ಉಳಿದಿರುವುದು ಎಷ್ಟು; (ತಾಲ್ಲೂಕುವಾರು, ಗ್ರಾಮವಾರು, ಯೋಜನೆವಾರು ಮಾಹಿತಿ ನೀಡುವುದು)

(ಇ) ಕೂಲಿ ಕಾರ್ಮಿಕರ ಕೊರತೆಯ ಹಿನ್ನಲೆಯಲ್ಲಿ, ಯಾಂತ್ರೀಕೃತ ತೋಟಗಾರಿಕೆಗೆ ಹೆಚ್ಚು ಉತ್ತೇಜನ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳುವ ಮುಂದಿನ ಯೋಜನೆಗಳಾವುವು?